



ಅರುಣ ಪಿ. ಭಟ್ಟ

## ವಾರಭವಿಷ್ಯ: 11.05.2023ದಿಂದ 17.05.2023ರವರೆಗೆ




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ 12. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---




ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ವ್ಯವಹಾರ, ಒಪ್ಪಂದ, ಭೇಟಿ ಇತ್ಯಾದಿ ಕೆಲಸಗಳಲ್ಲಿ ಯಶಸ್ಸು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ನಿಮ್ಮ ಪೋಷಕರ ಸಂತೋಷಕ್ಕೆ ನೀವು ಕಾರಣರಾಗುತ್ತೀರಿ. ಶುಭದಿನ 14. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---




ಆರೋಗ್ಯ ಸುಧಾರಿಸುವುದು. ಆಸ್ತಿ ಖರೀದಿ ಬಗ್ಗೆ ಚಿಂತನೆ. ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ವಾರ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರ ಆಗುವುದು. ತಂದೆ ತಾಯಿಯವರ ಆರೋಗ್ಯ ಸುಧಾರಣೆ, ಮಾನ, ಸನ್ಮಾನ ದೊರೆಯುವುದು. ಶುಭದಿನ 16. ಚಂಡಿ ಪಾರಾಯಣ ಮಾಡಿರಿ.

---




ನವೋಲ್ಲಾಸ ಬರುವುದು. ಧರ್ಮ ದಾನಕ್ಕಾಗಿ ಖರ್ಚು ಹೆಚ್ಚಾಗುತ್ತದೆ. ಮಿತ್ರರಿಗೆ ಸಹಾಯ ಆಗುತ್ತದೆ. ವ್ಯಾಪಾರದಲ್ಲಿ ಅಧಿಕ ಲಾಭ, ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರಿಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ ಸಿಗಲಿದೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ 15. ಶಿವ ಕವಚ ಓದಿರಿ.

---




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನು ವಿಚಾರದಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ 13. ಸೌಂದರ್ಯಲಹರಿ ಪಠಿಸಿರಿ.

---




ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಹಲವು ವ್ಯಕ್ತಿಗಳ ಪರಿಚಯ ಆಗುತ್ತದೆ. ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ನಿಮ್ಮ ಆದಾಯ ಮೂಲಗಳಿಂದ ಬರುವ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ನಿಮ್ಮ ಹಣದ ಮೂಲವನ್ನು ಸರಿಯಾದ ದಾರಿಯಲ್ಲಿ ವಿತರಿಸಲು ಯಶಸ್ಸು ಸಾಧಿಸುತ್ತೀರಿ. ಶುಭದಿನ 15. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.

---




ಈ ವಾರ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸಿನಿಮಾ, ವೈದ್ಯಕೀಯ, ಕಲೆ ಈ ರೀತಿಯ ವೃತ್ತಿಯಲ್ಲಿ ಇರುವವರಿಗೆ ಅತ್ಯುತ್ತಮವಾದ ಲಾಭ ಇದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಆರೋಗ್ಯವು ಚೆನ್ನಾಗಿರುತ್ತದೆ. ಕಾನೂನು ವ್ಯಾಜ್ಯಗಳು ಇದ್ದಲ್ಲಿ ಎದುರು ಪಕ್ಷದವರು ಸರಿಸಮವಾದ ಹೋರಾಟ ಮಾಡುತ್ತಾರೆ. ಶುಭದಿನ 16. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.

---




ಖರ್ಚುಗಳು ಹೆಚ್ಚಾಗಿ ಆದಾಯದಲ್ಲಿ ಕೊರತೆ ಉಂಟಾಗಿ ಚಿಂತಿತರಾಗುತ್ತೀರಿ. ಮುಖ್ಯವಾಗಿ ವಾರವಿಡೀ ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವ್ಯಾಪಾರದಲ್ಲಿ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ವೈಯಕ್ತಿಕ ಸಂಬಂಧಗಳು ಉತ್ತಮವಾಗಿರುತ್ತವೆ. ಶುಭದಿನ 15. ಶ್ರೀ ದುರ್ಗಾಪಾರಾಯಣ ಮಾಡಿರಿ.

---




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಭುಜದ ನೋವು, ತಲೆ ನೋವು ನಿಮ್ಮನ್ನು ಕಾಡಲಿದೆ. ವಾರದ ಅಂತ್ಯಕ್ಕೆ ಕುಟುಂಬದವರ ಬೆಂಬಲ ದೊರೆಯಲಿದೆ. ಸಂಬಂಧದಲ್ಲಿ ಬಾಂಧವ್ಯ ಗಟ್ಟಿಯಾಗುತ್ತದೆ. ಶುಭದಿನ 14. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.

---




ವ್ಯಾಪಾರ ವಹಿವಾಟು ಮಾಡುವವರು ಪ್ರತಿಷ್ಠಿತ ಸಂಸ್ಥೆಯೊಂದರ ಜತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಕಾಡುವುದಿಲ್ಲ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಎಂಜಿನಿಯರ್‌ಗಳಿಗೆ ತಾಂತ್ರಿಕ ಜ್ಞಾನ ಹೆಚ್ಚಿಸಿಕೊಳ್ಳುವ ಅವಕಾಶ ದೊರೆಯುತ್ತದೆ. ಶುಭದಿನ 16. ಕಾಲಭೈರವನ ಸೇವೆ ಮಾಡಿರಿ.

---




ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಯಾವುದೇ ವಿಚಾರದಲ್ಲಿ ನನಗೆ ತಿಳಿದಿದ್ದೇ ಸತ್ಯ ಎಂಬ ಹಟಮಾರಿತನ ಒಳ್ಳೆಯದಲ್ಲ. ಭೂಮಿ ಖರೀದಿ ಮಾಡುವ ಸಾಧ್ಯತೆಗಳಿವೆ. ಶುಭದಿನ 17. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---




ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ಈ ಅವಧಿಯಲ್ಲಿ ದೇವತಾ ಆರಾಧನೆಗೆ ನಿಮ್ಮ ಶ್ರಮ ಹಾಕುತ್ತೀರಿ. ವಾರದ ಮಧ್ಯ ಭಾಗದಲ್ಲಿ ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆರೋಗ್ಯದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ. ಹಣಕಾಸಿನ ಸಮಸ್ಯೆಗಳು ಕಾಡುತ್ತಿದ್ದಲ್ಲಿ ಪರಿಹಾರ ಮಾರ್ಗಗಳು ಗೋಚರಿಸುತ್ತವೆ. ಶುಭದಿನ 16. ಕನಕಧಾರಾ ಸ್ತೋತ್ರ ಪಠಣ ಮಾಡಿರಿ.